ಆ) ಇಲ್ಲ. ಭೂ ಮಾಲೀಕರ ಒಪ್ಪಿಗೆ ಪಡೆದು ಕರ್ನಾಟಕ ಭೂ ಸುಧಾರಣೆ ಕಾಯಿದೆ ಕಲಂ 109ರಂತೆ ಜಮೀನನ್ನು ಕ್ರಯಕ್ಕೆ ಪಡೆಯಲು ಸರ್ಕಾರದ ಅನುಮತಿ ಕೋರಿರುವುದರಿಂದ ಸ್ಥಳೀಯ ರೈತರಿಗೆ ತೊಂದರೆ ಉಂಟಾಗುವ ಪ್ರಶ್ನೆ ಉದ್ಭವಿಸುವುದಿಲ್ಲ.

ಇ) ಇಲ್ಲ.

ಈ) ಭೂ ಸುಧಾರಣೆ ಕಾಯಿದೆ ಕಲಂ 79ಎ 79ಬಿ, 80ನ್ನು ಉಲ್ಲಂಘಿಸಿರುವ ಬಗ್ಗೆ ವಿವರವಾದ ತನಿಖೆ ನಡೆಸಲು ಜಿಲ್ಲಾಧಿಕಾರಿ ಬೆಂಗಳೂರು ಇವರಿಗೆ ನಿರ್ದೇಶನ ನೀಡಲಾಗಿದೆ. ಪ್ರಸ್ತುತ ಸಂಸ್ಥೆಯವರಿಗೆ ಪ್ರಶ್ನಿತ ಜಮೀನನ್ನು ಹೊಂದಲು ಸರ್ಕಾರದಿಂದ ಯಾವುದೇ ಅನುಮತಿ ನೀಡಿರುವುದಿಲ್ಲ.

ಬೆಂಗಳೂರು ಗ್ರಾಮಾಂತರ ಜಿಲ್ಲೆಯಲ್ಲಿ ಅಂತರರಾಷ್ಟ್ರೀಯ ವಿಮಾನ ನಿಲ್ದಾಣದ ನಿರ್ಮಾಣ.

8 (47)

ಶ್ರೀ ಹೆಚ್.ಸಿ.ಬಾಲಕೃಷ್ಣ (ಮಾಗಡಿ): ಮುಖ್ಯಮಂತ್ರಿಗಳು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಬೆಂಗಳೂರು ಗ್ರಾಮಾಂತರ ಜಿಲ್ಲೆಯ ಯಾವ ತಾಲ್ಲೂಕಿನಲ್ಲಿ ಅಂತರರಾಷ್ಟ್ರೀಯ ವಿಮಾನ ನಿಲ್ದಾಣವನ್ನು ನಿರ್ಮಿಸಲಾಗುವುದು?

ಆ) ಇದಕ್ಕಾಗಿ ಈವರೆವಿಗೆ ಎಷ್ಟು ಜಮೀನನ್ನು ಸ್ವಾಧೀನಪಡಿಸಿಕೊಳ್ಳಲಾಗಿದೆ? ಈ ಬಗ್ಗೆ ಸರ್ಕಾರದವರು ಕೈಗೊಂಡಿರುವ ಕ್ರಮಗಳೇನು?

ಇ) ವಿಮಾನ ನಿಲ್ದಾಣ ಪ್ರಕ್ರಿಯೆಯು ಅತ್ಯಂತ ಮಂದಗತಿಯಲ್ಲಿ ನಡೆಯುತ್ತಿರಲು ಕಾರಣಗಳೇನು?

ಈ) ಈ ಕಾರ್ಯ ತ್ವರಿತಗತಿಯಲ್ಲಿ ನಡೆಯಲು ಸರ್ಕಾರದವರು ಕೈಗೊಳ್ಳುವ ಕ್ರಮಗಳೇನು?

ಶ್ರೀ ಜೆ.ಹೆಚ್.ಪಟೇಲ್ (ಮುಖ್ಯ ಮಂತ್ರಿಗಳು):

ಅ) ಬೆಂಗಳೂರು ಗ್ರಾಮಾಂತರ ಜಿಲ್ಲೆಯ ದೇವನಹಳ್ಳಿ ಮತ್ತು ಬೆಂಗಳೂರು ಉತ್ತರ ತಾಲ್ಲೂಕಿನ ಸರಹದ್ದಿನಲ್ಲಿ ಗುರುತಿಸಲಾದ ನಿವೇಶನದಲ್ಲಿ ಅಂತರರಾಷ್ಟ್ರೀಯ ವಿಮಾನ ನಿಲ್ದಾಣವನ್ನು ನಿರ್ಮಿಸುವ ಪ್ರಸ್ತಾವನೆ ಇದೆ.

ಆ) ಈ ಯೋಜನೆಗಾಗಿ, ಕರ್ನಾಟಕ ಕೈಗಾರಿಕಾ ಪ್ರದೇಶಗಳ ಅಭಿವೃದ್ಧಿ ಮಂಡಳಿಯ ಮುಖಾಂತರ 4276 ಎಕರೆ 11 1/2 ಗುಂಟೆ ಜಮೀನನ್ನು ಗುರುತಿಸಲಾಗಿದೆ. ಇದರಲ್ಲಿ ಸುಮಾರು 3500 ಎಕರೆಯಷ್ಟು ಜಮೀನನ್ನು ವಿಮಾನ ನಿಲ್ದಾಣದ ಯೋಜನೆಗಾಗಿ ನಿಯೋಜಿಸುವ ಪ್ರಸ್ತಾಪವಾಗಿದೆ.

ಇ) ವಿಮಾನ ನಿಲ್ದಾಣ ಸ್ಥಾಪನೆ ಒಳಗೊಂಡಂತೆ ನಾಗರೀಕ ವಾಯುಯಾನ ವಿಷಯಗಳು ಕೇಂದ್ರ ಸರ್ಕಾರಕ್ಕೆ ಸಂಬಂಧಪಟ್ಟಿದ್ದು, ಈ ಯೋಜನೆಗೆ ಕೇಂದ್ರ ಸರ್ಕಾರದ ಒಪ್ಪಿಗೆ ಅವಶ್ಯವಾಗಿದೆ. ಈ ಒಪ್ಪಿಗೆಯನ್ನು ಕೋರಿ ರಾಜ್ಯ ಸರ್ಕಾರವು ನವೆಂಬರ್ 1996ರಲ್ಲಿ ಕೇಂದ್ರಸರ್ಕಾರವನ್ನು ಸಂಪರ್ಕಿಸಿದ್ದು, ಕೇಂದ್ರ ನಾಗರೀಕ ವಿಮಾನಯಾನ ಅಧಿಕಾರಿಗಳೊಂದಿಗೆ ಇದರ ಬಗ್ಗೆ ರಾಜ್ಯ ಸರ್ಕಾರದ ಹಿರಿಯ ಅಧಿಕಾರಿಗಳು ಈ ಯೋಜನೆಯ ವಿವಿಧ ಅಂಶಗಳ ಮೇಲೆ ದೀರ್ಘ ಚರ್ಚೆ ನಡೆಸಿದ್ದಾರೆ ಆದಾಗ್ಯೂ ಕೇಂದ್ರ ಸರ್ಕಾರದ ಒಪ್ಪಿಗೆ ಈವರೆವಿಗೂ ದೊರೆತಿಲ್ಲ.

ಈ) ರಾಜ್ಯ ಸರ್ಕಾರವು ಈ ಯೋಜನೆಗೆ ಪ್ರಾಧಾನ್ಯತೆ ಮೇಲೆ ಒಪ್ಪಿಗೆ ನೀಡಲು ಕೇಂದ್ರ ಸರ್ಕಾರವನ್ನು ಒತ್ತಾಯಿಸುತ್ತಾ ಕೇಂದ್ರ ಸರ್ಕಾರದ ಒಪ್ಪಿಗೆ ದೊರೆತಕೂಡಲೇ ನಿರ್ಮಾಣದ ಕಾರ್ಯವನ್ನು ತ್ವರಿತಗತಿಯಲ್ಲಿ ನಡೆಸಲಾಗುವುದು.

ಬಾದಾಮಿ ಮತ ಕ್ಷೇತ್ರದಲ್ಲಿ ವಿದ್ಯುತ್ ಸೌಲಭ್ಯಗಳನ್ನು ಕಲ್ಪಿಸುವುದು

9 (149)

ಶ್ರೀ ಬಿ.ಬಿ.ಚಿಮ್ಮನಕಟ್ಟಿ (ಬಾದಾಮಿ): ಮಾನ್ಯ ಇಂಧನ ರಾಜ್ಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ

ಅ) ಬಾದಾಮಿ ಮತಕ್ಷೇತ್ರದ 48 ಹಳ್ಳಿಗಳ ಬಡಾವಣೆಗಳಿಗೆ ಹಲವಾರು ವರ್ಷಗಳಿಂದ ಬೀದಿ ದೀಪಗಳ ವ್ಯವಸ್ಥೆ ಆಗಬೇಕಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೆ?

ಆ) ಬಂದಿದ್ದಲ್ಲಿ ಎಷ್ಟು ಗ್ರಾಮಗಳ ಬಡಾವಣೆಗಳಿಗೆ ವಿದ್ಯುತ್ ಸೌಲಭ್ಯಗಳನ್ನು ಕಲ್ಪಿಸಲಾಗಿದೆ?

ಇ) ಇನ್ನುಳಿದ ಬಡಾವಣೆಗಳಿಗೆ ಈ ಆರ್ಥಿಕ ವರ್ಷದಲ್ಲಿ ವಿದ್ಯುತ್ ಸೌಲಭ್ಯಗಳನ್ನು ಕಲ್ಪಿಸಲು ಸರ್ಕಾರ ಕ್ರಮ ಕೈಗೊಳ್ಳುವುದೇ?

ಶ್ರೀ ಶರಣಬಸಪ್ಪ ದರ್ಶನಾಪುರ (ಇಂಧನ ರಾಜ್ಯ ಸಚಿವರು):

ಅ) ಹೌದು.